# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 312 |
| ಸದಸ್ಯರ ಹೆಸರು | : | ಶ್ರೀ ಮೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.08.2026. (ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಾವೇರಿ ಜಿಲ್ಲೆ. ಶಿಗ್ಗಾವಿ ತಾಲ್ಲೂಕಿನ ಗ್ರಾಮ ಪಂಚಾಯತಿಯಲ್ಲಿ ಅಧಿಕಾರಿಗಳು ಬದುಕಿರುವ ವ್ಯಕ್ತಿಗೆ ಮರಣ ಪ್ರಮಾಣ ಪತ್ರ ನೀಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ: ಈ ರೀತಿಯಾಗಲು ಕಾರಣಗಳೇನು: (ಮಾಹಿತಿ ಒದಗಿಸುವುದು) | ಬದುಕಿರುವ ವ್ಯಕ್ತಿಗೆ ಮರಣ ಪ್ರಮಾಣ ಪತ್ರ ನೀಡಿರುವ ಪ್ರಕರಣವು ಶಿಗ್ಗಾಂವ ತಾಲ್ಲೂಕಿನ ಅತ್ತಿಗೇರಿ ಗ್ರಾಮ ಪಂಚಾಯತಿಯಲ್ಲಿ ವರದಿಯಾಗಿರುತ್ತದೆ. |
| (ಆ) | ದಾಖಲೆಗಳನ್ನು ಸರಿಯಾಗಿ ಪರಿಶೀಲಿಸದೆ ಬದುಕಿದ್ದವರಿಗೆ ಮರಣ ಪ್ರಮಾಣ ಪತ್ರ ನೀಡಿರುವ ಕಾರಣದಿಂದ ಸದರಿ ವ್ಯಕ್ತಿಗೆ ಆಗಿರುವ ನಷ್ಟವನ್ನು ಯಾವ ರೀತಿಯಲ್ಲಿ ಭರಿಸಲಾಗುವುದು ಮತ್ತು ಇದರಿಂದ ಆದ ಪರಿಣಾಮಗಳನ್ನು ಸರಿಪಡಿಸಲು ಸರ್ಕಾರದ ತ್ವರಿತ ಕ್ರಮಗಳೇನು: ಯಾವ ಕಾಲಮಿತಿಯಲ್ಲಿ ಸರಿಪಡಿಸಲಾಗುವುದು: | ಶಿಗ್ಗಾಂವ ತಾಲ್ಲೂಕು, ಅತ್ತಿಗೇರಿ ಗ್ರಾಮ ಪಂಚಾಯತಿಯಲ್ಲಿ ಜೀವಂತ ಮಹಿಳೆಗೆ ಮರಣ ಪ್ರಮಾಣ ಪತ್ರವನ್ನು ದಿನಾಂಕ:14-03-2025 ರಂದು ವಿತರಿಸಿದ್ದು ಈ ಪ್ರಕರಣ ವರದಿಯಾದ ನಂತರ ವಿತರಿಸಿದ ಮರಣ ಪ್ರಮಾಣ ಪತ್ರವನ್ನು ಹಿಂಪಡೆದು ಮೂಲತಃ ಮೃತ ವ್ಯಕ್ತಿಗೆ ಮರಣ ಪ್ರಮಾಣ ಪತ್ರವನ್ನು ದಿನಾಂಕ:23-04-2025 ರಂದು ವಿತರಿಸಿರುತ್ತಾರೆ. |
| (ಇ) | ಈ ರೀತಿ ನಿರ್ಲಕ್ಷ್ಯ ಮಾಡಿದ ಅಧಿಕಾರಿಯ ಮೇಲೆ ಕೈಗೊಂಡ ಕಾನೂನು ಕ್ರಮಗಳೇನು? (ವಿವರಗಳನ್ನು ಒದಗಿಸುವುದು) | ಶಿಗ್ಗಾಂವ ತಾಲ್ಲೂಕು, ಅತ್ತಿಗೇರಿ ಗ್ರಾಮ ಪಂಚಾಯತಿಯಲ್ಲಿ ಜೀವಂತ ಮಹಿಳೆಗೆ ಮರಣ ಪ್ರಮಾಣ ಪತ್ರ ವಿತರಿಸಿ ಕರ್ತವ್ಯ ಲೋಪವಸಗಿರುವ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ತ್ವರಿತವಾಗಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಗ್ರಾಅಪ 798 ಗ್ರಾಪಂಅ 2026

**(ಈಶ್ವರ ಬಿ. ಖಂಡ್ರೆ )**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.